## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಹೆಚ್.ಎನ್.ಶಿವಶಂಕರ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹಾಗೂ ಶ್ರೀ ಏಜಾಜ್ ಅಹಮ್ಮದ್ ಸಿದ್ಧಿಕಿ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ ಇವರ ವಿರುದ್ಧದ ಆಪಾದನೆಗಳ ಬಗ್ಗೆ – ಇಲಾಖಾ ವಿಚಾರಣೆ – ಅಂತಿಮ ಆದೇಶ.

**ಓದಲಾಗಿದೆ.**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ಇವರ ಪತ್ರ ದಿನಾಂಕ. 27-06-2009
2. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 93 ಜಿಪಅ 2009, ದಿನಾಂಕ. 02-07-2009
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ಇವರ ಪತ್ರ ದಿನಾಂಕ. 16-10-2009
4. ಕಾರಣ ಕೇಳುವ ನೋಟೀಸ್ ಜಾರಿ ಮಾಡಿದ ದಿನಾಂಕ. 02-01-2010 ಮತ್ತು 12-10-2010.
5. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 93 ಜಿಪಅ 2009, ದಿನಾಂಕ. 10-06-2010, ದಿನಾಂಕ. 07-07-2010 ಮತ್ತು ಸರ್ಕಾರದ ಪತ್ರ ದಿನಾಂಕ. 01-01-2011.
6. ವಿಚಾರಣಾಧಿಕಾರಿಗಳ ವಿಚಾರಣಾ ವರದಿ ದಿನಾಂಕ. 03-08-2011.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ.27-06-2009ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ಇವರು ಶ್ರೀ ಹೆಚ್.ಎನ್.ಶಿವಶಂಕರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹಾಗೂ ಶ್ರೀ ಏಜಾಜ್ ಅಹಮ್ಮದ್ ಸಿದ್ಧಿಕಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ ಇವರುಗಳು ಸರ್ಕಾರದಿಂದ ಬಿಡುಗಡೆಯಾದ ಅನುದಾನದಡಿ ರಸ್ತೆಗಳನ್ನು ಅಭಿವೃದ್ಧಿಪಡಿಸದೇ ಬೇರೆ ಇನ್ನಿತರ ಯೋಜನೆಯಡಿ ಅಭಿವೃದ್ಧಿಪಡಿಸಿದ ರಸ್ತೆಗಳನ್ನೇ ತೋರಿಸಿ ಬಿಲ್ಲುಗಳನ್ನು ಪಾವತಿಸಿ ಕರ್ತವ್ಯಲೋಪವೆಸಗಿರುವುದು ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದ ಸದರಿಯವರುಗಳನ್ನು ವಿಚಾರಣೆ ಕಾಯ್ದಿರಿಸಿ ಅಮಾನತ್ತುಗೊಳಿಸುವಂತೆ ಕೋರಿದ್ದರು.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ. 02-07-2009ರ ಸರ್ಕಾರದ ಆದೇಶದಲ್ಲಿ ಶ್ರೀ ಹೆಚ್.ಎನ್.ಶಿವಶಂಕರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹಾಗೂ ಶ್ರೀ ಏಜಾಜ್ ಅಹಮ್ಮದ್ ಸಿದ್ಧಿಕಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ ಇವರುಗಳನ್ನು ಇಲಾಖಾ ವಿಚಾರಣೆಯನ್ನು ಬಾಕಿಯಿಟ್ಟು ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಲಾಗಿತ್ತು.

----2

ಮೇಲೆ ಕ್ರಮ ಸಂಖ್ಯೆ. (3)ರಲ್ಲಿ ಓದಲಾದ ದಿನಾಂಕ. 16-10-2009ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ಶ್ರೀ ಹೆಚ್.ಎನ್.ಶಿವಶಂಕರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹಾಗೂ ಶ್ರೀ ಏಜಾಜ್ ಅಹಮ್ಮದ್ ಸಿದ್ಧಿಕಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ ಇವರುಗಳ ವಿರುದ್ಧದ ಆಪಾದನೆಗಳ ಬಗ್ಗೆ ಕರಡು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿದ್ದರು.

ಮೇಲೆ ಕ್ರಮ ಸಂಖ್ಯೆ. (4)ರಲ್ಲಿ ಓದಲಾದ ದಿನಾಂಕ. 02-01-2010 ಮತ್ತು 12-10-2010ರಲ್ಲಿ ಶ್ರೀ ಹೆಚ್.ಎನ್.ಶಿವಶಂಕರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಶ್ರೀ ಏಜಾಜ್ ಅಹಮ್ಮದ್ ಸಿದ್ಧಿಕಿ, ಸಹಾಯಕ ಇಂಜಿನಿಯರ್ ಮತ್ತು ಶ್ರೀ ಗೌಡರಾಮನಂಜಪ್ಪ, ಕಿರಿಯ ಇಂಜಿನಿಯರ್ ಇವರುಗಳಿಗೆ ಕಾರಣ ಕೇಳುವ ನೋಟೀಸನ್ನು ಹಾಗೂ ಅನುಬಂಧ 1 ರಿಂದ 4ರಲ್ಲಿ ದೋಷಾರೋಪಣಾ ಪಟ್ಟಿಯನ್ನು ಜಾರಿ ಮಾಡಲಾಗಿತ್ತು.

ಮೇಲೆ ಕ್ರಮ ಸಂಖ್ಯೆ. (5)ರಲ್ಲಿ ಓದಲಾದ ದಿನಾಂಕ. 10-06-2010 ಮತ್ತು ದಿನಾಂಕ. 07-07-2010 ಸರ್ಕಾರದ ಆದೇಶದಲ್ಲಿ ಮತ್ತು ಸರ್ಕಾರದ ಪತ್ರದಲ್ಲಿ 01-01-2011ರ ಶ್ರೀ ಹೆಚ್.ಎನ್.ಶಿವಶಂಕರ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹಾಗೂ ಶ್ರೀ ಏಜಾಜ್ ಅಹಮ್ಮದ್ ಸಿದ್ಧಿಕಿ, ಅಂದಿನ ಸಹಾಯಕ ಇಂಜಿನಿಯರ್ ಮತ್ತು ಶ್ರೀ ಗೌಡರಾಮನಂಜಪ್ಪ, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ ಇವರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ನಡೆಸಲು ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಮಂಡ್ಯ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ಮೇಲೆ ಕ್ರಮ ಸಂಖ್ಯೆ. (6)ರಲ್ಲಿ ಓದಲಾದ ದಿನಾಂಕ. 3-8-2011ರಂದು ವಿಚಾರಣಾಧಿಕಾರಿಯವರು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಆಪಾದಿತರಾದ ಶ್ರೀ ಹೆಚ್.ಎನ್.ಶಿವಶಂಕರ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹಾಗೂ ಶ್ರೀ ಏಜಾಜ್ ಅಹಮ್ಮದ್ ಸಿದ್ಧಿಕಿ, ಅಂದಿನ ಸಹಾಯಕ ಇಂಜಿನಿಯರ್ ಮತ್ತು ಶ್ರೀ ಗೌಡರಾಮನಂಜಪ್ಪ, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ ಇವರುಗಳ ವಿರುದ್ಧ ಯಾವ ಆರೋಪಗಳು ರುಜುವಾತಾಗಿಲ್ಲವೆಂದು ಅಭಿಪ್ರಾಯಪಟ್ಟಿರುತ್ತಾರೆ.

ಪ್ರಸ್ತಾವನೆಯನ್ನು ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ ಆಪಾದಿತ ಅಧಿಕಾರಿ / ನೌಕರರ ವಿರುದ್ಧದ ಆರೋಪಗಳ ಬಗ್ಗೆ ವಿಚಾರಣಾಧಿಕಾರಿಗಳು ಸಲ್ಲಿಸಿರುವ ವರದಿಯನ್ನು ಒಪ್ಪಿ ಆರೋಪಗಳಿಂದ ದೋಷಮುಕ್ತರನ್ನಾಗಿ ಮಾಡಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡಂತೆ ಆದೇಶ.

**<u>ಆದೇಶ ಸಂಖ್ಯೆ ಗ್ರಾಅಪ 93 ಜಿಪಅ 2009 ಬೆಂಗಳೂರು, ದಿನಾಂಕ. 02-12-2011</u>**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಹೆಚ್.ಎನ್. ಶಿವಶಂಕರ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಶ್ರೀ ಏಜಾಜ್ ಅಹಮ್ಮದ್ ಸಿದ್ಧಿಕಿ, ಅಂದಿನ ಸಹಾಯಕ ಇಂಜಿನಿಯರ್ ಮತ್ತು ಶ್ರೀ ಗೌಡರಾಮನಂಜಪ್ಪ, ಅಂದಿನ ಕಿರಿಯ

-----3

ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ ಇವರ ಮೇಲಿನ ಆರೋಪಗಳು ಸಾಬೀತಾಗಿಲ್ಲವಾದ್ದರಿಂದ, ಆರೋಪಗಳಿಂದ ದೋಷಮುಕ್ತಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
9/12/2011
(ಎನ್.ವೈ.ಸಾಗರ),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ/ ಸಣ್ಣ ನೀರಾವರಿ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ.
6. ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ.1242, 8ನೇ ಕ್ರಾಸ್, ಚಂದ್ರಾಲೇಔಟ್, ಬೆಂಗಳೂರು-560 040 (ದೂರವಾಣಿ ಸಂಖ್ಯೆ 23394245)
7. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಮಂಡ್ಯ - ಸಂಬಂಧಿಸಿದ ದಾಖಲೆಗಳನ್ನು ವಿಚಾರಣಾಧಿಕಾರಿಗಳಿಗೆ ಮಂಡಿಸಿ ವಿಚಾರಣೆ ಸುಗಮವಾಗಿ ನಡೆಸಲು ಕ್ರಮವಹಿಸಲು ಕೋರಿದೆ.
8. ಸಂಬಂಧಿಸಿದ ಆಪಾದಿತ ಅಧಿಕಾರಿ / ನೌಕರರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ಇವರ ಮುಖಾಂತರ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ) / (ಸೇವೆಗಳು-ಸಿ)
10. ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
11. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರದಾನ ಕಾರ್ಯದರ್ಶಿ / ಕಾರ್ಯದರ್ಶಿ/ ಉಪ ಕಾರ್ಯದರ್ಶಿ ಇವರುಗಳ ಅಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
12. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.